# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 832 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಎಸ್.ವೀಣಾ ಅಚ್ಚಯ್ಯ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.12.2018 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನ ಅಯ್ಯಂಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಯ್ಯಂಗೇರಿ ಗ್ರಾಮದ ಅಲೆಮಾರಿ/ ಅರೆಅಲೆಮಾರಿ ಜನಾಂಗ ವಾಸವಾಗಿರುವ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಈ ಜನಾಂಗದ ಹಲವು ಕುಟುಂಬಗಳಿಗೆ ವಸತಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಯ್ಯಂಗೇರಿ ಗ್ರಾಮದ ವಸತಿರಹಿತರಿಗೆ ಜಿಲ್ಲೆಯಿಂದ ಬಂದಿರುವ ಪ್ರಸ್ತಾವನೆಯನುಸಾರ ವಸತಿ ಸೌಲಭ್ಯ ಒದಗಿಸಲಾಗಿರುತ್ತದೆ. ಸಿ.ಸಿ.ರಸ್ತೆ ನಿರ್ಮಾಣಕ್ಕಾಗಿ ದಿನಾಂಕ: 27-03-2018ರಲ್ಲಿ ಪ್ರಸ್ತಾವನೆ ಬಂದಿದ್ದು, ಕರ್ನಾಟಕ ಅಲೆಮಾರಿ/ ಅರೆಅಲೆಮಾರಿ ಅಭಿವೃದ್ಧಿ ಮಂಡಳಿಯಲ್ಲಿ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯೊಳಗೆ ಸದರಿ ಜನಾಂಗ ವಾಸವಾಗಿರುವ ಕಾಲೋನಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಹಾಗೂ ವಸತಿರಹಿತರಿಗೆ ವಸತಿ ಸೌಲಭ್ಯ ಒದಗಿಸಲಾಗುವುದು? | ಮೂಲಭೂತ ಸೌಲಭ್ಯ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನ ಲಭ್ಯತೆಗೆ ಒಳಪಟ್ಟಿರುತ್ತದೆ. |

ಸಂ: ಹಿಂವಕ 1259 ಬಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.